# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಡಾ// ರಾಜ್‌ಕುಮಾರ್ ವಾರ್ಡ್ ಸಂಖ್ಯೆ: 106

ಸಂ : ಸ.ಅ(ವಾ–106)/ಪಿ.ಆರ್/ /2021–22 ದಿನಾಂಕ: 21/08/2021

## ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 21–08–2021 ರಂದು ವಾರ್ಡ್ ಸಂಖ್ಯೆ: 106 **ಡಾ// ರಾಜ್‌ಕುಮಾರ್ ವಾರ್ಡ್** ನಲ್ಲಿ ಶ್ರೀಮತಿ ಗೀತಾ ಎಲ್, ಕಾರ್ಯಪಾಲಕ ಅಭಿಯಂತರು, ಬಿಬಿಎಂಪಿ ಹಾಗೂ ವಾರ್ಡ್ ನಂ. 106 ರ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ/ನೌಕರರು:–**

1) ಶ್ರೀಮತಿ. ಎನ್. ಅನ್ನಪೂರ್ಣ, ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅ.ದಾಸರಹಳ್ಳಿ.
2) ಶ್ರೀ ತೀರ್ಥಪ್ರಸಾದ್, ಎಇಇ, ಘನತ್ಯಾಜ್ಯ ವಿಭಾಗ
3) ಶ್ರೀ ರೇಣುಕಾ ಪ್ರಸಾದ್. ಎ.ಆರ್.ಒ
4) ಶ್ರೀ ರಾಜೇಂದ್ರ ಕಂದಾಯ ಪರಿವೀಕ್ಷಕರು.
5) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು
6) ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
7) ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
8) ನಾಗಣ್ಣಗೌಡ, ಹಿರಿಯ ಆರೋಗ್ಯ ಪರಿವೀಕ್ಷಕರು
9) ಶ್ರೀ ಚಂದ್ರಶೇಖರ್, ಕಿರಿಯ ಆರೋಗ್ಯ ಪರಿವೀಕ್ಷಕರು
10) ಶ್ರೀ ಅವಿನಾಶ್, ಸೂಪರ್‌ವೈಸರ್, ಘನತ್ಯಾಜ್ಯ
11) ಶ್ರೀ ರಾಜೇಶ್, ಸೂಪರ್‌ವೈಸರ್, ಘನತ್ಯಾಜ್ಯ
12) ಶ್ರೀ ಮುರಳಿ, ತೆರಿಗೆ ವಸೂಲಾತಿಗಾರರು

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸಭೆಯಲ್ಲಿ ಈ ಹಿಂದಿನ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.
- **ಆರೋಗ್ಯ ಇಲಾಖೆ:-** ಅಧ್ಯಕ್ಷರು ಆರೋಗ್ಯ ಇಲಾಖೆಯ ಅಧಿಕಾರಿಗಳ ಜೊತೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ನೀಡಿರುವ ಕೊರೋನಾ ಲಸಿಕೆಯ ವಿವರಗಳನ್ನು ಪಡೆದುಕೊಂಡರು.

- **ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ**:- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಗೆ ಸಂಭಂದಿಸಿದಂತೆ ಮಾಹಿತಿಯನ್ನು ಘನತ್ಯಾಜ್ಯ ವಿಭಾಗ ಅಧಿಕಾರಿಗಳಿಂದ ಪಡೆದುಕೊಂಡರು

- **ಬೆಸ್ಕಾಂ**: - ವಾರ್ಡ್ ವ್ಯಾಪ್ತಿಯ ಎಂ.ಸಿ ಬಡಾವಣೆಯಲ್ಲಿ ಭೂಗತ ಕೇಬಲ್ ಅಳವಡಿಕೆ ಕಾಮಗಾರಿ ಪ್ರಗತಿಯಲ್ಲಿದ್ದು ಶೀಘ್ರವಾಗಿ ಪೂರ್ಣಗೊಳಿಸಲು ಮಾನ್ಯ ಅಧ್ಯಕ್ಷರು ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು.

- **ಬೀದಿದೀಪಗಳು** : ವಾರ್ಡ್ ವ್ಯಾಪ್ತಿಯ 9ನೇ ಅಡ್ಡರಸ್ತೆಯಲ್ಲಿ ಬೀದಿದೀಪಗಳು ಸರಿಯಾಗಿ ಉರಿಯುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದ್ದು ಕೂಡಲೇ ಕ್ರಮಕೈಗೊಳ್ಳುವಂತೆ ಮಾನ್ಯ ಅಧ್ಯಕ್ಷರು ಸಂಭಂದಿಸಿದ ಅಧಿಕಾರಿಗೆ ತಿಳಿಸಿದರು.
- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಅನುಮತಿಯಿಲ್ಲದ ಬ್ಯಾನರ್ ಮತ್ತು ಫ್ಲೆಕ್ಸ್‌ಗಳನ್ನು ಕೂಡಲೇ ತೆರವುಗೊಳಿಸುವಂತೆ ತಿಳಿಸಿದರು.
- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಅನುಮತಿಯಿಲ್ಲದ ಸ್ಥಳಗಳಲ್ಲಿ ನಿರ್ಮಿಸಿರುವ ಪುತ್ಥಳಿಗಳನ್ನು ಕೂಡಲೇ ತೆರವುಗೊಳಿಸುವಂತೆ ತಿಳಿಸಿದರು.
- ಮಾನ್ಯ ಅಧ್ಯಕ್ಷರು ಮಾತನಾಡಿ ಕಂದಾಯ ಇಲಾಖೆಯವರು ಇಲ್ಲಿಯವರೆವಿಗೂ ಎಷ್ಟು ಖಾತಾಗಳನ್ನು ಮಾಡಿರುವ ಬಗ್ಗೆ ವಿವರಗಳನ್ನು ಪಡೆದರು.
- ಮಾನ್ಯ ಅಧ್ಯಕ್ಷರು ಪ್ರಗತಿಯಲ್ಲಿರುವ ಕಾಮಗಾರಿಗಳ ಬಗ್ಗೆ ವಿವರ ಪಡೆದರು.
- ಮಾನ್ಯ ಅಧ್ಯಕ್ಷರು ರಸ್ತೆ ಗುಂಡಿಗಳನ್ನು ಶೀಘ್ರವಾಗಿ ಮುಚ್ಚಲು ಕ್ರಮಕೈಗೊಳ್ಳಬೇಕೆಂದು ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

21/08/21

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

21/08/21

for ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್ ಅಧಿಕಾರಿಗಳು
ವಾರ್ಡ್ ನಂ.106 ಡಾ//ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
5) ಮುಖ್ಯ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ